ಆ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಇ) ಸದರಿ ನೇಕಾರರಿಗೆ ತಮ್ಮ ಉಪ ಜೀವನ ನಡೆಸಲು ಅದರಿಸಿರುವ ನೇಕಾರರಿಗೆ ಅವಶ್ಯವಿರುವ ವಸತಿ ಕಾರ್ಯಗಾರಗಳಿಗೆ ಸರ್ಕಾರದಿಂದ ಸಿಗುವ ಸಹಾಯಧನದ ಮೊತ್ತವೆಷ್ಟು ಹಾಗೂ ಸಾಲ ವೆಷ್ಟು ಮತ್ತು ಒಟ್ಟು ವೆಚ್ಚವೆಷ್ಟು ?

ಈ) ನೇಕಾರರಿಗೆ ಅವಶ್ಯವಿರುವ ವಸತಿ ಕಾರ್ಯಾಗಾರಗಳನ್ನು ಮಂಜೂರು ಮಾಡಿ ಕಾರ್ಯಾಗಾರ ನಿರ್ಮಿಸುವ ಬಗ್ಗೆ ತೀವ್ರ ಕ್ರಮ ಕೈಗೊಳ್ಳುವುದೇ ?

ಉ) ಈ ಕಾರ್ಯಗಾರಗಳನ್ನು ಎಷ್ಟು ಅವಧಿಯಲ್ಲಿ ನಿರ್ಮಿಸಲಾಗುವುದು.

ಶ್ರೀ ನಸೀರ್ ಅಹಮದ್ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು)

ಅ) ಹೌದು.

ಆ) ಈ ಸಂಘದ ಪ್ರಸ್ತಾವನ್ನು ಪರಿಶೀಲಿಸಲಾಗಿ ಕೇಂದ್ರ ಸರ್ಕಾರದ ವಸತಿ ಮತ್ತು ಕಾರ್ಯಾಗಾರ ನಿರ್ಮಾಣ ಯೋಜನೆ ಮಾರ್ಗ ಸೂಚಿ ಪ್ರಕಾರ ಸದರಿ ಸಂಘವು ಅರ್ಹವಿರುವುದಿಲ್ಲ ಮತ್ತು ಹಿರೇಕೆರೂರು ತಾಲ್ಲೂಕು ಮಟ್ಟದ ಕುಶಲ ಕರ್ಮಿಗಳ ವಿವಿಧೋದ್ದೇಶ ಸಹಕಾರ ಸಂಘವು ಶೃಂಗ ಸಂಘದ ಸದಸ್ಯರಾಗಲು ಬರುವುದಿಲ್ಲದ ಕಾರಣ ಪ್ರಸ್ತಾವನೆಯನ್ನು ಪರಿಗಣಿಸಿರುವುದಿಲ್ಲ.

ಇ)

		ಗ್ರಾಮಾಂತರ ಪ್ರದೇಶ	ನಗರ ಪ್ರದೇಶ
1.	ಒಂದು ಮನೆ ಮತ್ತು ಕಾರ್ಯಾಗಾರದ ವೆಚ್ಚ	15,700-00	25,000-00
2.	ರಾಜ್ಯ ಸರ್ಕಾರದ ಸಹಾಯಧನ	3,000-00	2,500-00
3.	ಕೇಂದ್ರ ಸರ್ಕಾರದ ಸಹಾಯಧನ	3,000-00	2,500-00
4.	ಹುಡ್ಕೋ ಸಾಲ	9,700-00	19,500-00
5.	ಫಲಾನುಭವಿಗಳ ವಂತಿಕೆ		500-00

ಈ) ಈ ಸಂಘದ ಸದಸ್ಯರಿಗೆ ಕಂಡಿಕೆ (ಅ) ಉತ್ತರಿಸಿರುವಂತೆ ಈ ಯೋಜನೆ ಕಾರ್ಯ ರೂಪಕ್ಕೆ ತರುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಉ) ಈ ಸಂಘದ ಸದಸ್ಯರಿಗೆ ಕಂಡಿಕೆ (ಆ) ಉತ್ತರಿಸಿರುವಂತೆ ಈ ಯೋಜನೆ ಕಾರ್ಯರೂಪಕ್ಕೆ ತರುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ವಿಷಯ: ಹಿರೇಕೆರೂರಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗದ ವಿದ್ಯಾರ್ಥಿಗಳ ವಸತಿಗೃಹ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1384 (2190)

ಶ್ರೀ ಬಿ. ಹೆಚ್. ಬನ್ನಿಕೋಡ್ (ಹಿರೇಕೆರೂರು) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಿರೇಕೆರೂರು ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಜನಾಂಗದ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಸತಿಗೃಹದ ಸರ್ಕಾರಿ ಕಟ್ಟಡ ವಿಲ್ಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಸದರಿ ಕಟ್ಟಡದ ನಿರ್ಮಾಣಕ್ಕೆ ಬೇಕಾಗುವ ಅಂದಾಜು ವೆಚ್ಚವೆಷ್ಟು?

ಈ) ಸದರಿ ಕಟ್ಟಡವನ್ನು ಯಾವಾಗ ಕಟ್ಟಲು ಪ್ರಾರಂಭಿಸಲಾಗುವುದು ಹಾಗೂ ಪೂರ್ಣಗೊಳಿಸಲು ಬೇಕಾಗುವ ಸಮಯವೆಷ್ಟು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.

ಆ) ಹೌದು.

ಇ) ಕಟ್ಟಡ ಕಟ್ಟಲು ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ತಯಾರಿಸಿದ ನಂತರವೇ ನಿರ್ದಿಷ್ಟವಾದ ಅಂದಾಜು ವೆಚ್ಚ ತಿಳಿಯುತ್ತದೆ.

ಈ) ಸೂಕ್ತ ನಿವೇಶನ ಆಯ್ಕೆ ಮಾಡಿದ ನಂತರ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಸರ್ಕಾರಿ ಆಡಳಿತಾತ್ಮಕ ಮಂಜೂರಾತಿ ಪಡೆದು ಕಾಮಗಾರಿ ಪ್ರಾರಂಭಿಸಲಾಗುವುದು. ಆದಷ್ಟು ಬೇಗ ಕಟ್ಟಡವನ್ನು ಪೂರ್ಣಗೊಳಿಸಲಾಗುವುದು.

ವಿಷಯ: ಹಿರೇಕೆರೂರು ತಾಲ್ಲೂಕಿನ ಮೇದೂರು ಮತ್ತು ಕುಡಪಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 1385 (2191)

ಶ್ರೀ ಬಿ. ಹೆಚ್. ಬನ್ನಿಕೋಡ್ (ಹಿರೇಕೆರೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಿರೇಕೆರೂರು ತಾಲ್ಲೂಕು ಮೇದೂರು ಮತ್ತು ಕುಡಪಲಿ ಗ್ರಾಮಗಳ ಆರೋಗ್ಯ ಕೇಂದ್ರಗಳಿಗೆ ಸರ್ಕಾರಿ ಕಟ್ಟಡಗಳಿಲ್ಲದೆ ಜನರಿಗೆ ತೊಂದರೆಯಾಗುತ್ತಿರುವುದನ್ನು ಸರಕಾರ ಗಮನಿಸಿದೆಯೆ ?

ಆ) 1992-93ನೇ ಸಾಲಿನ ಆಯವ್ಯಯದಲ್ಲಿ ಮೇದೂರು ಮತ್ತು ಕುಡಪಲಿ ಗ್ರಾಮಗಳಲ್ಲಿ ಆರೋಗ್ಯ ಕೇಂದ್ರಗಳ ಕಟ್ಟಡಗಳನ್ನು ಮತ್ತು ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ವಸತಿ ಗೃಹ ಕಟ್ಟಡಗಳನ್ನು ಕಟ್ಟಿಸಲು ಆಯವ್ಯಯದಲ್ಲಿ ಸೇರ್ಪಡಿಸಲಾಗಿದೆಯೆ ?

ಇ) ಸದರಿ ಕಟ್ಟಡಗಳ ನಿರ್ಮಾಣ ಕಾರ್ಯಗಳನ್ನು ಎಂದು ಪ್ರಾರಂಭಿಸಲಾಗುವುದು ಹಾಗೂ ಪೂರ್ಣಗೊಳಿಸಲು ಬೇಕಾಗುವ ಕಾಲಾವಕಾಶವೆಷ್ಟು ?

ಶ್ರೀ ಜೆ. ಪುಟ್ಟಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಜಿಲ್ಲಾ ಪರಿಷತ್ ತನ್ನ ಆಯವ್ಯಯದಲ್ಲಿ ಹಣ ಒದಗಿಸಿದ ನಂತರ ಈ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುವುದು.

ವಿಷಯ:ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಸಲಹಾ ಮಂಡಳಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1386 (2199)

ಶ್ರೀಮತಿ ಮೋಟಮ್ಮ (ಮುಡಿಗೆರೆ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೆಳಕಂಡ ಸಂಘ ಸಂಸ್ಥೆಗಳಿಗೆ ರಾಜ್ಯ ಸಮಾಜ ಕಲ್ಯಾಣ ಮಂಡಳಿಯಿಂದ ಯಾವ ಯಾವ ಕಾರ್ಯಕ್ರಮಗಳಿಗೆ ಅನುದಾನವನ್ನು ಬಿಡುಗಡೆ ಮಾಡಿರುವರು ?

ಆ) ಗ್ರ್ಯಾಂಟ್-ಇನ್-ಏಡ್ ನಿಯಮ ಪಾಲಿಸಿದ್ದೀರಾ ?

ಇ) ಇಲ್ಲದೇ ಇರುವುದಕ್ಕೆ ಕಾರಣಗಳನ್ನು ಕೊಡಿ